# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಟೆಂಡರ್ ಪರಿಶೀಲನಾ ಸಮಿತಿ ಹಾಗೂ ಟೆಂಡರ್ ಅಂಗೀಕಾರ ಪ್ರಾಧಿಕಾರ ಸಮಿತಿ ರಚಿಸುವ ಕುರಿತು.

ಓದಲಾಗಿದೆ: ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಇವರ ಪತ್ರ ಸಂಖ್ಯೆ: ಕಗ್ಯಾಇ/ಜಿಗ್ಯಾ/ಸಸಮಿತಿ/131/2017-18/228, ದಿನಾಂಕ: 05.10.2018.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ ಇವರು ಗ್ಯಾಸೆಟಿಯರ್ ಇಲಾಖೆಯ ಜಿಲ್ಲಾ ಗ್ಯಾಸೆಟಿಯರ್‌ಗಳ ರಚನೆ, ಸಂಪಾದನೆ ಮತ್ತು ಮುದ್ರಣ ಕಾರ್ಯಗಳನ್ನು ಕೈಗೊಳ್ಳುತ್ತಿದ್ದು, 2018-19ನೇ ಸಾಲಿನಲ್ಲಿ ಬೀದರ್ ಜಿಲ್ಲಾ ಗ್ಯಾಸೆಟಿಯರ್ ಹಾಗೂ ದಾವಣಗೆರೆ, ಹರಿಹರ, ಹರಪ್ಪನಹಳ್ಳಿ, ಹಿರಿಯೂರು, ಹೊಸದುರ್ಗ ಹಾಗೂ ಹೊಳಲ್ಕೆರೆ ತಾಲ್ಲೂಕು ಗ್ಯಾಸೆಟಿಯರ್‌ಗಳ ಮುದ್ರಣ ಕಾರ್ಯವನ್ನು ಹಮ್ಮಿಕೊಂಡಿದ್ದು, ಸಾದಿಲ್ವಾರು ವೆಚ್ಚ ಕೈಪಿಡಿ 1958ರ ನಿಯಮ 44(ಎ) ಪ್ರಕಾರ ಎಲ್ಲಾ ಕಚೇರಿಗಳ ಹಾಗೂ ಸಂಸ್ಥೆಗಳ ಮುದ್ರಣ ಕಾರ್ಯವನ್ನು ತಪ್ಪದೇ ಮುದ್ರಣಾಲಯದಲ್ಲಿ ಮಾಡಿಸಬೇಕಾಗಿರುತ್ತದೆ. ಮುದ್ರಣ ಕೆಲಸವನ್ನು ಕೈಗೊಳ್ಳುವುದು ಮುದ್ರಣಾಲಯದಿಂದ ಸಾಧ್ಯವಿಲ್ಲದಿದ್ದರೆ ಟೆಂಡರ್‌ಗಳನ್ನು ಕರೆದ ಆನಂತರ ಮುದ್ರಣ ಕೆಲಸವನ್ನು ಖಾಸಗಿ ಮುದ್ರಣಾಲಯಕ್ಕೆ ವಹಿಸಿಕೊಟ್ಟಿದ್ದರೆ ಮತ್ತು ಸೂಕ್ತ ಕಾರಣಗಳಿಗಾಗಿ ಟೆಂಡರ್‌ಗಳನ್ನು ಕರೆಯದೆಯೇ ಕೆಲಸವನ್ನು ಖಾಸಗಿ ಮುದ್ರಣಾಲಯಕ್ಕೆ ವಹಿಸಬೇಕಾಗಿ ಬಂದಿದ್ದರೆ ಸಾದಿಲ್ವಾರು ವೆಚ್ಚ ಕೈಪಿಡಿ 1958ರ ನಿಯಮ 44(ಡಿ)(III)ರನ್ವಯ ಖಾಸಗಿ ಮುದ್ರಣಾಲಯವು ಕೋರಿದ ದರಗಳು ಸಮಂಜಸವಾಗಿವೆ ಎಂದು ಸರ್ಕಾರಿ ಮುದ್ರಣಾಲಯದ ನಿರ್ದೇಶಕರು ಪ್ರಮಾಣಿಕರಿಸಬೇಕಾಗಿರುತ್ತದೆ. ಇಲಾಖೆಯ ಸಂಪುಟಗಳನ್ನು ಮುದ್ರಿಸುವ ಪೂರ್ವದಲ್ಲಿ ಸರ್ಕಾರಿ ಮುದ್ರಣಾಲಯಕ್ಕೆ ಪತ್ರ ಬರೆದು ಅವರಿಂದ ಅನುಮತಿಯನ್ನು ಪಡೆದುಕೊಂಡು, ಟೆಂಡರ್ ಕರೆದು ಸಂಪುಟಗಳನ್ನು ಖಾಸಗಿ ಮುದ್ರಣಾಕಾರರಿಂದ ಮುದ್ರಿಸಲಾಗುತ್ತಿದೆ.

ಮುಂದುವರೆದು, ಸಾದಿಲ್ವಾರು ವೆಚ್ಚ ಕೈಪಿಡಿ 1958ರ ನಿಯಮ 44(ಡಿ)(III)ರನ್ವಯ ಖಾಸಗಿ ಮುದ್ರಣಾಲಯವು ಕೋರಿದ ದರಗಳು ಸಮಂಜಸವಾಗಿವೆ ಎಂದು ಸರ್ಕಾರಿ ಮುದ್ರಣಾಲಯದ ನಿರ್ದೇಶಕರು ಪ್ರಮಾಣಿಕರಿಸಬೇಕಾಗಿರುವುದರಿಂದ, ಟೆಂಡರ್ ದಾಖಲೆಗಳನ್ನು ಪರಿಶೀಲಿಸುವ ಸಮಯದಲ್ಲಿ ಮುಖ್ಯ ಸಂಪಾದಕರ ಅಧ್ಯಕ್ಷತೆಯಲ್ಲಿ ಟೆಂಡರ್ ಪರಿಶೀಲನಾ ಸಮಿತಿಯನ್ನು ರಚಿಸಿ ಅದರಲ್ಲಿ ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರನ್ನು ಸದಸ್ಯರನ್ನಾಗಿ ಸೇರಿಸಿಕೊಳ್ಳಲಾಗುತ್ತಿದ್ದು, ಆದರೆ ಸದರಿಯವರು ತಮ್ಮನ್ನು ಟೆಂಡರ್ ಪರಿಶೀಲನಾ ಸಮಿತಿ ಸಭೆಯಲ್ಲಿ ಸೇರ್ಪಡಿಸಿ ಸರ್ಕಾರಿ ಆದೇಶ ಹೊರಡಿಸುವುದು ಸೂಕ್ತವೆಂದು ಮೌಖಿಕವಾಗಿ ತಿಳಿಸಿದ್ದು, ಗ್ಯಾಸೆಟಿಯರ್ ಇಲಾಖೆಯಿಂದ ಪ್ರಕಟಿಸುವ ಎಲ್ಲಾ ಗ್ಯಾಸೆಟಿಯರ್ ಹಾಗೂ ಇತರೆ ಪ್ರಕಟಣೆಗಳ ಮುದ್ರಣಕ್ಕೆ ಸಂಬಂಧಿಸಿದಂತೆ, ಮುಖ್ಯಸಂಪಾದಕರ ಅಧ್ಯಕ್ಷತೆಯಲ್ಲಿ ಟೆಂಡರ್ ಪರಿಶೀಲನಾ ಸಮಿತಿ ಹಾಗೂ ಟೆಂಡರ್ ಅಂಗೀಕಾರ ಪ್ರಾಧಿಕಾರ ಸಮಿತಿ ರಚಿಸಿ ಆದೇಶ ಹೊರಡಿಸಲು ಸರ್ಕಾರನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 15 ಕರಾಗೆ 2018**

**ಬೆಂಗಳೂರು, ದಿನಾಂಕ: 04.01.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಗ್ಯಾಸೆಟಿಯರ್ ಇಲಾಖೆಯಿಂದ ಪ್ರಕಟಿಸುವ ಎಲ್ಲಾ ಗ್ಯಾಸೆಟಿಯರ್ ಹಾಗೂ ಇತರೆ ಪ್ರಕಟಣೆಗಳ ಮುದ್ರಣಕ್ಕೆ ಸಂಬಂಧಿಸಿದಂತೆ, ಟೆಂಡರ್

ಪರಿಶೀಲನಾ ಸಮಿತಿ ಹಾಗೂ ಟೆಂಡರ್ ಅಂಗೀಕಾರ ಪ್ರಾಧಿಕಾರ ಸಮಿತಿ ರಚಿಸಲು ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡಂತೆ ರಚಿಸಲಾಗಿದೆ.

| ಕ್ರ.ಸಂ | ಇಲಾಖೆ | ಅಧ್ಯಕ್ಷರು/ಸದಸ್ಯರು |
|---|---|---|
| 01. | ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು. | ಅಧ್ಯಕ್ಷರು. |
| 02. | ನಿರ್ದೇಶಕರು, ಮುದ್ರಣ ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳು, ಬೆಂಗಳೂರು. | ಸದಸ್ಯರು. |
| 03. | ಹಿರಿಯ ಸಂಪಾದಕರು-1, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು. | ಸದಸ್ಯರು. |
| 04. | ಹಿರಿಯ ಸಂಪಾದಕರು-2, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು. | ಸದಸ್ಯ ಕಾರ್ಯದರ್ಶಿ. |
| 05. | ಅಧೀಕ್ಷಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು. | ಸದಸ್ಯರು. |

ಪರತ್ತು: ಟೆಂಡರ್ ಪರಿಶೀಲನಾ ಸಮಿತಿ ಹಾಗೂ ಟೆಂಡರ್ ಅಂಗೀಕಾರ ಪ್ರಾಧಿಕಾರ ಸಮಿತಿ ರಚನೆಯ ಕುರಿತು ಪ್ರತಿ ವರ್ಷವು ಸರ್ಕಾರದಿಂದ ಅಂಗೀಕಾರ ಪಡೆಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಕೆ. ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ).

ಇವರಿಗೆ :

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಕೆಂಗೇರಿ ಹೊರವಲಯ ಮುದ್ರಣಾಲಯ, ಬೆಂಗಳೂರು- ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿಯನ್ನು:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್ಎ), (ಇ&ಎಸ್‌ಎಸ್ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು, (ಎ&ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಪಿ.ಬಿ.ನಂ.5329, ಬೆಂಗಳೂರು.
3. ಮುಖ್ಯ ಸಂಪಾದಕರು ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ. ಗೋಪುರ, ಬೆಂಗಳೂರು.
5. ಸಮಿತಿಯ ಸದಸ್ಯರುಗಳಿಗೆ (ಮುಖ್ಯ ಸಂಪಾದಕರ ಮೂಲಕ).
6. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.